ESTD : No. JRB/Cell.II/69/Regn-4876/77-78
Date : 09-12-1977

✆:080-26601442

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

## THE BANGALORE CITY DIST. CO-OPERATIVE UNION LTD.,

‘ ಸಹಕಾರ ಭವನ ’ ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018
E-mail: bcdcu1977@gmail.com

| ಹೆಚ್.ಟಿ. ನಾಗೇಶ್ | ಚಾಮರಾಜು ಕೆ.ಎಸ್. | ವೆಂಕಟೇಶ್ ಎಂ. |
|---|---|---|
| ಅಧ್ಯಕ್ಷರು | ಉಪಾಧ್ಯಕ್ಷರು | ಖಜಾಂಚಿ |

## ಪ್ರಕಟಣೆಗಾಗಿ

**ಬೆಂಗಳೂರು ದಕ್ಷಿಣ ತಾಲ್ಲೂಕಿನ ತಾವರೆಕೆರೆ ಶಿಬಿರ ಕಛೇರಿಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮ.**

ಬೆಂಗಳೂರು :– ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಮತ್ತು ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಇವರುಗಳ ಸಂಯುಕ್ತ ಆಶ್ರಯದಲ್ಲಿ ದಿನಾಂಕ: 25–07–2024 **ಬೆಂಗಳೂರು ದಕ್ಷಿಣ ತಾಲ್ಲೂಕಿನ ತಾವರೆಕೆರೆ ಶಿಬಿರ ಕಛೇರಿಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳಿಗೆ** ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಗುರುವಾರ ತಾವರೆಕೆರೆ ವ್ಯವಸಾಯ ಸೇವಾ ಸಹಕಾರ ಸಂಘದ ಸಭಾಂಗಣ ತಾವರೆಕೆರೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಇಲ್ಲಿ ಏರ್ಪಡಿಸಲಾಗಿತ್ತು.

ಸಮಾರಂಭದ ಉದ್ಘಾಟನೆಯನ್ನು ಬೆಂಗಳೂರು ಸಹಕಾರು ಹಾಲು ಒಕ್ಕೂಟದ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರಾದ **ಶ್ರೀ ನರಸಿಂಹಮೂರ್ತಿ** ಇವರು ಮಾತನಾಡುತ್ತಾ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ಸಹಕಾರ ಸಂಘಗಳ ಬಲವರ್ಧನೆಗಾಗಿ ಸಹಕಾರ ಸಂಘಗಳನ್ನು ಸಂಘಟಿಸಿ ತರಬೇತಿ ನೀಡುವಂತಹ ಉದ್ದೇಶ ಹೊಂದಿದೆ. ಹಾಗೂ ಪರಿಣಿತ ಉಪನ್ಯಾಸಕರನ್ನು ಕರೆದು ತರಬೇತಿಯನ್ನು ನೀಡುತ್ತಿದ್ದು ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಹೆಚ್.ಟಿ. ನಾಗೇಶ್‌ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ಮಹಾಮಂಡಳವು ಶಿಕ್ಷಣ ತರಬೇತಿ ಪ್ರಚಾರ ಹಮ್ಮಿಕೊಳ್ಳುವುದರ ಮೂಲಕ ತರಬೇತಿಯನ್ನು ನೀಡುತ್ತಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತರಬೇತಿಯಲ್ಲಿ ನೀಡುವಂತಹ ಮಾಹಿತಿಗಳನ್ನು ನಿಮ್ಮ ಸಂಘಗಳಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು. ಇದರ ಜೊತೆಗೆ 6 ತಿಂಗಳ ಡಿ.ಸಿ.ಎಂ. ತರಬೇತಿ ಶಿಕ್ಷಣವನ್ನು ಸಹ ನೀಡುತ್ತಿದ್ದು, ಇದರ ಉಪಯೋಗವನ್ನು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ವಿಶೇಷಾಹ್ವಾನಿತರಾಗಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರು, ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಲಿ., ಬೆಂಗಳೂರು ಶ್ರೀ ಡಿ. ಹನುಮಂತಯ್ಯರವರು ಮಾತನಾಡುತ್ತಾ, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ಕಡಿಮೆ ಬಡ್ಡಿದರದಲ್ಲಿ ಸಾಲವನ್ನು ನೀಡುತ್ತಿದ್ದು, ಸಹಕಾರ ಸಂಘಗಳ ಕಾರ್ಯದರ್ಶಿಗಳು ಹೆಚ್ಚಿನ ಸದಸ್ಯರಿಗೆ ಹಸು ಸಾಲವನ್ನು ಕೊಡಿಸುವಂತಹ ಕಾರ್ಯನಿರ್ವಹಿಸಿದ್ದಲ್ಲಿ ಸಹಕಾರ ಕ್ಷೇತ್ರವು ಇನಷ್ಟು ಸದೃಢವಾಗಿ ಬೆಳೆಯು ಸಹಾಯವಾಗುತ್ತದೆ ಎಂದು ತಿಳಿಸಿದರು.

...2

ಮುಖ್ಯ ಅತಿಥಿಗಳಾಗಿ ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಬೆಂಗಳೂರು ಇದರ ವೃತ್ತಿಪರ ನಿರ್ದೇಶಕರಾದ ಶ್ರೀ ಕೆ.ಎಂ. ಕೃಷ್ಣಯ್ಯ, ಶ್ರೀ ಚಾಮರಾಜು ಉಪಾಧ್ಯಕ್ಷರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು, ತಾವರೆಕೆರೆ ವ್ಯವಸಾಯ ಸೇವಾ ಸಹಕಾರ ಸಂಘದ ಅಧ್ಯಕ್ಷರಾದ ಶ್ರೀ ಟಿ.ಎಲ್ ಕೆಂಪೇಗೌಡ, ಡಾ॥ ಅಜಯ್ ಕುಮಾರ್, ಉಪವ್ಯವಸ್ಥಾಪಕರು, ಮಾಗಡಿ ಶಿಬಿರ ಕಛೇರಿ ಮತ್ತು ತಾವರೆಕೆರೆ ಉಪಶಿಬಿರ ಕಛೇರಿ, ಬಮೂಲ್ ಇವರುಗಳು ಉಪಸ್ಥಿತರಿದ್ದರು.

ಹಿರಿಯ ಉಪನಿರ್ದೇಶಕರು (ನಿವೃತ್ತ) ಕೆ.ಎಂ.ಎಫ್. ಬೆಂಗಳೂರು ಶ್ರೀ ಆರ್ ರಾಜಣ್ಣ "ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕರುಗಳ ಕರ್ತವ್ಯ ಮತ್ತು ಜವಾಬ್ದಾರಿಗಳ" ಕುರಿತು ಉಪನ್ಯಾಸವನ್ನು ನೀಡಿದರು ಮತ್ತು ರಾಜ್ಯ ತರಬೇತುದಾರರು, ಬೆಂಗಳೂರು ಶ್ರೀ ಸ್ಟಾರ್ ವೆಂಕಟೇಶ್, "ವ್ಯಕ್ತಿತ್ವ ವಿಕಸನ ಮತ್ತು ಮಾನಸಿಕ ಒತ್ತಡಗಳ ನಿರ್ವಹಣೆ" ಕುರಿತು ಉಪನ್ಯಾಸವನ್ನು ನೀಡಿದರು. ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಮಂಜುನಾಥ ನಾಗತಾಣ ಮತ್ತು ಮುಖ್ಯಸ್ಥರು, ತಾವರೆಕೆರೆ ಉಪಶಿಬಿರ ಕಛೇರಿ ಶ್ರೀ ಎಸ್.ಎಸ್. ರಂಗಸ್ವಾಮಿ ಸ್ವಾಗತಿಸಿ ಹಾಗೂ ವಂದಿಸಿದರು.

ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ


ನಂದಿನಿ
ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು
ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು
ಹಾಗೂ